## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಮರಿತಿಬ್ಬೇಗೌಡ**
**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 803**
**ಉತ್ತರಿಸಬೇಕಾದ ದಿನಾಂಕ : 20-09-2022**
**ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು**

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಯಶಸ್ವಿನಿ ಆರೋಗ್ಯ ವಿಮಾ ಯೋಜನೆ ಸ್ಥಗಿತಗೊಂಡಿದ್ದು ಯಾವಾಗ; | ಯಶಸ್ವಿನಿ ಆರೋಗ್ಯ ಯೋಜನೆಯು ದಿನಾಂಕ: 31.5.2018 ರಿಂದ ಸ್ಥಗಿತಗೊಂಡಿರುತ್ತದೆ. |
| ಆ) | ಸದರಿ ಯೋಜನೆಯನ್ನು ಸ್ಥಗಿತ ಗೊಳಿಸಿರುವುದರಿಂದ ಶ್ರೀಸಾಮಾನ್ಯರಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಇ) | ಸದರಿ ಯೋಜನೆಯನ್ನು ಮತ್ತೆ ಅನುಷ್ಠಾನಗೊಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ; | 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-67ರಲ್ಲಿ ರೈತ ಭಾಂದವರ ಬಹುದಿನಗಳ ಬೇಡಿಕೆ ಈಡೇರಿಸಲು ಯಶಸ್ವಿನಿ ಯೋಜನೆಯನ್ನು ಪರಿಷ್ಕರಿಸಿ ಮರು ಜಾರಿಗೊಳಿಸಲು ನಿರ್ಧರಿಸಿ ಈ ಯೋಜನೆಯಿಂದ ಗ್ರಾಮೀಣ ಪ್ರದೇಶದ ರೈತ ಕುಟುಂಬಗಳಿಗೆ ಅತ್ಯುತ್ತಮ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸುವ ಉದ್ದೇಶಕ್ಕಾಗಿ ರೂ.300 ಕೋಟಿಗಳನ್ನು ಒದಗಿಸಲಾಗುವುದೆಂದು ಘೋಷಿಸಲಾಗಿದೆ.<br><br>ಅದರಂತೆ ಸರ್ಕಾರದ ಆದೇಶ ಸಂಖ್ಯೆ ಸಿಓ 154 ಸಿಎಲ್ಎಸ್ 2022, ದಿನಾಂಕ:30-03-2022 ರಲ್ಲಿ ಯೋಜನೆ ಅನುಷ್ಠಾನಗೊಳಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ. ರಾಜ್ಯದಲ್ಲಿ ಯಶಸ್ವಿನಿ ಯೋಜನೆಯನ್ನು ಪುನರ್ ಜಾರಿಗೊಳಿಸುವ ಪ್ರಕ್ರಿಯೆ ಪ್ರಗತಿ ಹಂತದಲ್ಲಿರುತ್ತದೆ. |
| ಈ) | ಹಾಗಿದಲ್ಲಿ, ಯೋಜನೆಯ ರೂಪುರೇಷೆಗಳೇನು; | ಈ ಯೋಜನೆಯ ರೂಪುರೇಷೆಗಳು, ಮಾರ್ಗಸೂಚಿಗಳು ಹಾಗೂ ನಿಯಮಗಳನ್ನು ರೂಪಿಸುವ ಕಾರ್ಯವು ಪ್ರಗತಿ ಹಂತದಲ್ಲಿರುತ್ತದೆ. |
| ಉ) | ಯಾವ ಕಾಲಮಿತಿಯಲ್ಲಿ ಸದರಿ ಯೋಜನೆಯನ್ನು ಜಾರಿಗೆ ತರಲಾಗುವುದು? | ಈ ಯೋಜನೆಯನ್ನು 02-10-2022 ರಿಂದ ಜಾರಿಗೆ ತರಲಾಗುವುದು. |

**ಸಂಖ್ಯೆ: ಸಿಓ 335 ಸಿಎಲ್ಎಸ್ 2022**

ಎಸ್.ಟಿ. ಸೋಮಶೇಖರ್

**(ಎಸ್.ಟಿ. ಸೋಮಶೇಖರ್)**
**ಸಹಕಾರ ಸಚಿವರು**